## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 265 (288)
2. ಸದಸ್ಯರ ಹೆಸರು : ಡಾ|| ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 15.02.2024
4. ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಎತ್ತಿನಹೊಳೆ ಯೋಜನೆ ಪ್ರಾರಂಭವಾಗಿದ್ದು ಯಾವಾಗ, ಈ ಯೋಜನೆಯ ಉದ್ದೇಶಗಳೇನು; | ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು 2013-14 ನೇ ಸಾಲಿನಿಂದ ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>ಈ ಯೋಜನೆಯಡಿ ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ, ಪಶ್ಚಿಮಘಟ್ಟದ ಮೇಲ್ಭಾಗದಲ್ಲಿ ಹರಿಯುವ ಎತ್ತಿನಹೊಳೆ, ಕಾಡುಮನೆಹೊಳೆ, ಕೇರಿಹೊಳೆ ಮತ್ತು ಹೊಂಗದಹಳ್ಳದಿಂದ ಮುಂಗಾರು ಮಳೆ ಅವಧಿಯಲ್ಲಿ (139 ದಿನಗಳು) 24.01 ಟಿ.ಎಂ.ಸಿ ಪ್ರಮಾಣದ ಪ್ರವಾಹದ ನೀರನ್ನು ಎತ್ತಿ 07 ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಹಾಸನ ಹಾಗೂ ಚಿಕ್ಕಮಗಳೂರಿನ ಬರಪೀಡಿತ 29 ತಾಲ್ಲೂಕಿನ 38 ಪಟ್ಟಣ ಪ್ರದೇಶದ ಹಾಗೂ 6657 ಗ್ರಾಮಗಳ ಸುಮಾರು 75.59 ಲಕ್ಷ (Projected population for 2023-24) ಜನರಿಗೆ ಮತ್ತು ಜಾನುವಾರುಗಳಿಗೆ ಕುಡಿಯುವ ನೀರನ್ನು ಒದಗಿಸುವುದು ಹಾಗೂ 05 ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಹಾಸನ ಹಾಗೂ ತುಮಕೂರು ವ್ಯಾಪ್ತಿಯಲ್ಲಿ ಬರುವ 527 ಕೆರೆಗಳಿಗೆ ಅವುಗಳ ಸಾಮರ್ಥ್ಯದ ಶೇ.50% ರಷ್ಟು ತುಂಬಿಸಿ ಅಂತರ್ಜಲ ಮರುಪೂರಣ ಮಾಡುವುದು ಯೋಜನೆಯ ಉದ್ದೇಶವಾಗಿರುತ್ತದೆ. |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಆ) | ಇದುವರೆವಿಗೂ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಹಾಗೂ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ; (ವಿವರಗಳನ್ನು ನೀಡುವುದು) | ವಿವರಗಳನ್ನು **ಅನುಬಂಧ-1** ರಲ್ಲಿ ಒದಗಿಸಲಾಗಿದೆ. |
| ಇ) | 'ಭೈರಗೊಂಡ್ಲು' ಜಲಾಶಯದ ಕಾಮಗಾರಿಯು ಇನ್ನೂ ಪ್ರಾರಂಭವಾಗದಿರಲು ಕಾರಣಗಳೇನು; | ಕೊರಟಗೆರೆ ತಾಲ್ಲೂಕಿನ ರೈತರು ದೊಡ್ಡಬಳ್ಳಾಪುರ ತಾಲ್ಲೂಕಿನ ರೈತರಿಗೆ ನೀಡುವ ಪರಿಹಾರ ದರದಂತೆ ಅವರಿಗೂ ಸಹಾ ಏಕರೂಪ ದರ ನೀಡಲು ಒತ್ತಾಯಿಸಿದ್ದರಿಂದ ಭೈರಗೊಂಡ್ಲು ಜಲಾಶಯದ ಕಾಮಗಾರಿಗಳಿಗೆ ಅಡೆತಡೆ ಉಂಟಾಗಿರುತ್ತದೆ. ಭೂಸ್ವಾಧೀನ ಸಮಸ್ಯೆಯಿಂದ ಕಾಮಗಾರಿಯನ್ನು ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ. |
| ಈ) | ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಮಾಡಲು ಉದ್ದೇಶಿಸಿದೆ; ಹಾಗೂ ಯೋಜನೆಯನ್ನು ಎಷ್ಟು ಅವಧಿಯೊಳಗೆ ಪೂರ್ಣಗೊಳಿಸಲಾಗುವುದು? | ವಿವರಗಳನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ. |

**ಸಂಖ್ಯೆ: ಜಸಂಇ 08 ಡಬ್ಲ್ಯೂಎಲ್ಎ 2024**

**(ಡಿ.ಕೆ.ಶಿವಕುಮಾರ್)**
**ಉಪ ಮುಖ್ಯಮಂತ್ರಿಗಳು**

# ಅನುಬಂಧ-1

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಪುನರ್ ಪರಿಷ್ಕೃತ ವಿವರವಾದ ಯೋಜನಾ ವರದಿಗೆ ಸರ್ಕಾರದ ಆದೇಶ ದಿನಾಂಕ: 10.01.2023ರಂದು ರೂ.23,251.66 ಕೋಟಿಗಳ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. ಸದರಿ ಯೋಜನೆಯನ್ನು ಎರಡು ಹಂತಗಳಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಯೋಜನೆಯ ಪ್ರಸ್ತುತ ಹಂತದ ವಿವರಗಳು ಈ ಕೆಳಗಿನಂತಿವೆ:

- **ಹಂತ-1** ರಲ್ಲಿ ಏತ (lift) ಕಾಮಗಾರಿಗಳನ್ನು ಮತ್ತು ವಿದ್ಯುತ್ ಕಾಮಗಾರಿಗಳನ್ನು (Head works) 07 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಎಲ್ಲಾ ಕಾಮಗಾರಿಗಳು ಬಹುತೇಕ ಪೂರ್ಣಗೊಂಡಿದ್ದು, ಈ ಪೈಕಿ ಪ್ರಸ್ತುತ ವಿಯರ್- 4 & 5 ರಿಂದ ನೀರನ್ನೆತ್ತಿ ಪೂರ್ವ ಪರೀಕ್ಷಾರ್ಥ ಚಾಲನೆಗೊಳಿಸಲಾಗಿರುತ್ತದೆ. ದಿನಾಂಕ: 31.03.2024 ರ ಅಂತ್ಯಕ್ಕೆ ಎಲ್ಲಾ ಲಿಫ್ಟ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ಜೂನ್-2024 ರ ವೇಳೆಗೆ ಎಲ್ಲಾ 8 ವಿಯರ್ ಗಳಿಂದ ನೀರನ್ನೆತ್ತಿ ಪ್ರಾಯೋಗಿಕವಾಗಿ ಚಾಲನೆಗೊಳಿಸಿ ಗುರುತ್ವ ಕಾಲುವೆಯ ಸರಪಳಿ:42.00 ಕಿ.ಮೀ.ವರೆಗೆ ಹರಿಸಲು ಉದ್ದೇಶಿಸಲಾಗಿದೆ.

- **ಹಂತ-2** ರಲ್ಲಿ ಗುರುತ್ವ ಕಾಲುವೆ (Gravity main canal) ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು, ಸರಪಳಿ:0.00 ಕಿ.ಮೀ ರಿಂದ ಸರಪಳಿ:261.69 ಕಿ.ಮೀ ವರೆಗಿನ 252.61 ಕಿ.ಮೀ ಉದ್ದದ (ಮಾರ್ಗದ ಮಧ್ಯದಲ್ಲಿ ಸುಮಾರು 10.47 ಕಿ.ಮೀ ಉದ್ದದ ಮೇಲ್ಕಾಲುವೆ ಒಳಗೊಂಡಂತೆ) ಗುರುತ್ವ ಕಾಲುವೆ ನಿರ್ಮಾಣ ಪೈಕಿ 162.15 ಕಿ.ಮೀ. ವರೆಗಿನ ಕಾಲುವೆ ನಿರ್ಮಾಣ ಕಾಮಗಾರಿಗಳು ಪೂರ್ಣಗೊಂಡಿದ್ದು, 25.42 ಕಿ.ಮೀ ಉದ್ದದ ಗುರುತ್ವ ಕಾಲುವೆ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿದ್ದು, ಬಾಕಿ 65.04 ಕಿ.ಮೀ ಉದ್ದದ ಗುರುತ್ವ ಕಾಲುವೆ ನಿರ್ಮಾಣ ಕಾಮಗಾರಿಯನ್ನು ಅರಣ್ಯ ತೀರುವಳಿ, ರಾಷ್ಟ್ರೀಯ ಹೆದ್ದಾರಿ ಅನುಮತಿ, ರೈಲ್ವೇ ಇಲಾಖೆಯ ಅನುಮತಿ ಹಾಗೂ ಭೂಸ್ವಾಧೀನ ಪ್ರಕ್ರಿಯೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುವುದರಿಂದ ಇಲ್ಲಿಯವರೆಗೆ ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ.

- ಸಮತೋಲನಾ ಜಲಾಶಯಕ್ಕಿಂತ (Balancing Reservoir) ಮೊದಲು ಕವಲೊಡೆಯುವ ಮಧುಗಿರಿ ಫೀಡರ್, ಟಿ.ಜಿ.ಹಳ್ಳಿ- ರಾಮನಗರ ಫೀಡರ್ ಹಾಗೂ ಗೌರಿಬಿದನೂರು ಫೀಡರ್ ಪೈಪ್‌ಲೈನ್ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಒಟ್ಟು 254.97 ಕಿ.ಮೀ ಉದ್ದದ ಫೀಡರ್ ಪೈಪ್‌ಲೈನ್ ಪೈಕಿ 213.80 ಕಿ.ಮೀ ಕಾಮಗಾರಿಯು ಪೂರ್ಣಗೊಂಡಿದ್ದು, ಉಳಿಕೆ ಕಾಮಗಾರಿಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುತ್ತವೆ.

- ಭೈರಗೊಂಡ್ಲು ಸಮತೋಲನಾ ಜಲಾಶಯ (Balancing Reservoir) ನಿರ್ಮಾಣ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಈಗಾಗಲೇ ಗುತ್ತಿಗೆ ವಹಿಸಲಾಗಿದ್ದು, ಭೂಸ್ವಾಧೀನ ಸಮಸ್ಯೆಯಿಂದ ಕಾಮಗಾರಿಯನ್ನು ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ. ಪ್ರಸ್ತುತ ಪುನರ್ ಪರಿಷ್ಕೃತ ಯೋಜನಾ ವರದಿಯಂತೆ ಕಾಮಗಾರಿಯ ಬದಲಾದ ಸ್ವರೂಪಕ್ಕನುಣವಾಗಿ ಕೊರಟಗೆರೆ ತಾಲ್ಲೂಕು ಭೈರಗೊಂಡ್ಲು ಗ್ರಾಮದ ಸಮೀಪದ ಸ್ಥಳದ ಬದಲಾಗಿ ದೊಡ್ಡಬಳ್ಳಾಪುರ ತಾಲ್ಲೂಕು ಲಕ್ಕೇನಹಳ್ಳಿ ಗ್ರಾಮದ ಸಮೀಪ ನಿರ್ಮಿಸಲು ಉದ್ದೇಶಿಸಿರುವ ಸಮತೋಲನಾ ಜಲಾಶಯ (Balancing Reservoir) ನಿರ್ಮಾಣ ಕಾಮಗಾರಿಯನ್ನು ನಿಗಮದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಅನುಮೋದನೆ ಪಡೆದುಕೊಂಡು ಗುತ್ತಿಗೆದಾರರಿಗೆ ಕಾಮಗಾರಿ ವಹಿಸುವ ಸಂಬಂಧ ಕರಾರು ಮಾಡಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

- ಜಲಾಶಯದ ನಂತರದಲ್ಲಿ ಬರುವ ಲಿಫ್ಟ್ ಕಾಮಗಾರಿ ಮತ್ತು ಸ:22.30 ಕಿ.ಮೀ ವರೆಗಿನ ಗುರುತ್ವ ಪೈಪ್‌ಲೈನ್ ಕಾಮಗಾರಿಗಳು (ಕೋಲಾರ್ ಪ್ಯಾಕೇಜ್-1 &2) ಪ್ರಗತಿಯಲ್ಲಿದ್ದು, ಸ:22.30 ಕಿ.ಮೀ ನಿಂದ ಸ:36.965 ಕಿ.ಮೀ ವರೆಗಿನ ಗುರುತ್ವ ಪೈಪ್‌ಲೈನ್ ಕಾಮಗಾರಿಗಳು (ಕೋಲಾರ್ ಪ್ಯಾಕೇಜ್-3 & 4), ಕೋಲಾರ ಹಾಗೂ ಶ್ರೀನಿವಾಸಪುರ ಫೀಡರ್ ಪೈಪ್‌ಲೈನ್ ಕಾಮಗಾರಿಗಳನ್ನು ಗುತ್ತಿಗೆ ವಹಿಸಲಾಗಿದ್ದು, ಕಾಮಗಾರಿಗಳನ್ನು ಪ್ರಾರಂಭಿಸಬೇಕಿರುತ್ತದೆ.

- ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಗಾಗಿ ಜನವರಿ-2024ರ ಅಂತ್ಯಕ್ಕೆ ಒಟ್ಟಾರೆ ಸಂಚಿತ ರೂ.14812.00 ಕೋಟಿಗಳ ಆರ್ಥಿಕ ಪ್ರಗತಿ ಸಾಧಿಸಲಾಗಿರುತ್ತದೆ.

*****

## ಅನುಬಂಧ-2

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು ಪೂರ್ಣಗೊಳಿಸಲು ಕೆಳಕಂಡಂತೆ ಗುರಿ ಹಮ್ಮಿಕೊಳ್ಳಲಾಗಿರುತ್ತದೆ.

• **ಹಂತ-1 : 2023-24ನೇ ಸಾಲಿಗೆ**:

ದಿನಾಂಕ: 31.03.2024 ರ ಅಂತ್ಯಕ್ಕೆ ಎಲ್ಲಾ ಲಿಫ್ಟ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ಜೂನ್-2024 ರ ವೇಳೆಗೆ ಎಲ್ಲಾ 8 ವಿಯರ್‌ಗಳಿಂದ ನೀರನ್ನೆತ್ತಿ ಪ್ರಾಯೋಗಿಕವಾಗಿ ಚಾಲನೆಗೊಳಿಸಿ ಗುರುತ್ವ ಕಾಲುವೆಯ ಸರಪಳಿ:42.00ಕಿ.ಮೀ. ವರೆಗೆ ಹರಿಸಲು ಉದ್ದೇಶಿಸಲಾಗಿದೆ.

• **ಹಂತ-2 : 2024-25ನೇ ಸಾಲಿಗೆ:**

ದಿನಾಂಕ :01.11.2024ರ ಅಂತ್ಯಕ್ಕೆ ಎಲ್ಲಾ 8 ವಿಯರ್‌ಗಳಿಂದ 24.01 ಟಿ.ಎಂ.ಸಿ ನೀರನ್ನು ಮೇಲೆತ್ತಿ ಗುರುತ್ವ ಕಾಲುವೆ ಸರಪಳಿ 0.00 ಕಿ.ಮೀ ನಿಂದ 231.00 ಕಿ.ಮೀ ವರೆಗೆ (ಮಧುಗಿರಿ-ಪಾವಗಡ ಫೀಡರ್ ಒಳಗೊಂಡಂತೆ) ನಾಲೆಗೆ ಹರಿಸುವುದು ಮತ್ತು ಲಕ್ಕೇನಹಳ್ಳಿ ಸಮತೋಲನಾ ಜಲಾಶಯದ ಶೇ.50ರಷ್ಟು ಕಾಮಗಾರಿಯನ್ನು ಪೂರ್ಣಗೊಳಿಸುವುದು.

• **ಹಂತ-3 : 2025-26ನೇ ಸಾಲಿಗೆ:**

ದಿನಾಂಕ:01.11.2025ರ ಅಂತ್ಯಕ್ಕೆ ಎಲ್ಲಾ 8 ವಿಯರ್‌ಗಳಿಂದ 24.01 ಟಿ.ಎಂ.ಸಿ ನೀರನ್ನು ಮೇಲೆತ್ತಿ ಗುರುತ್ವ ಕಾಲುವೆ ಸರಪಳಿ 0.00 ಕಿ.ಮೀ ನಿಂದ 261.69 ಕಿ.ಮೀ ವರೆಗೆ (ಗೌರಿಬಿದನೂರು ಮತ್ತು ಟಿ.ಜಿ ಹಳ್ಳಿ-ರಾಮನಗರ ಫೀಡರ್ ಒಳಗೊಂಡಂತೆ) ನಾಲೆಗೆ ನೀರು ಹರಿಸುವುದು ಮತ್ತು ಲಕ್ಕೇನಹಳ್ಳಿ ಸಮತೋಲನಾ ಜಲಾಶಯದ ಬಾಕಿ ಕಾಮಗಾರಿಯನ್ನು ಆರ್ & ಆರ್ ಸಹಿತ ಪೂರ್ಣಗೊಳಿಸುವುದು.

• **ಹಂತ-4 : 2026-27ನೇ ಸಾಲಿಗೆ**:

ದಿನಾಂಕ:01.11.2026ರ ಅಂತ್ಯಕ್ಕೆ ಗುರುತ್ವ ಕಾಲುವೆ ಸರಪಳಿ :261.69 ಕಿ.ಮೀ ನಂತರದ ಎಲ್ಲಾ ಫೀಡರ್ ಕಾಮಗಾರಿಗಳನ್ನು ಪೂರ್ಣಗೊಳಿಸಿ (ಲಿಫ್ಟ್ ಕಾಮಗಾರಿ ಒಳಗೊಂಡಂತೆ) ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಒದಗಿಸುವುದು.

ಮೇಲೆ ವಿವರಿಸಿರುವಂತೆ ಯೋಜನೆಯನ್ನು 31.03.2027ರ ಅಂತ್ಯಕ್ಕೆ ಅನುದಾನದ ಲಭ್ಯತೆ ಮೇರೆಗೆ ಸಂಪೂರ್ಣವಾಗಿ ಪೂರ್ಣಗೊಳಿಸಲು ಯೋಜಿಸಲಾಗಿದೆ.

*****